# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 169(244) |
| ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 06.03.2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುತ್ತಿರುವ ಪರೀಕ್ಷೆಗಳಲ್ಲಿ ಲೋಪದೋಷ/ಗೊಂದಲಗಳು ಅವಾಂತರಗಳು ಸೃಷ್ಟಿಯಾಗಿ, ರಾಜ್ಯಾದ್ಯಂತ ಅಭ್ಯರ್ಥಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಲೋಕಸೇವಾ ಆಯೋಗವು ಕಳೆದ ಒಂದು ವರ್ಷದಲ್ಲಿ 12 ಅಧಿಸೂಚನೆಗಳನ್ನು ಹೊರಡಿಸಿ, ಒಟ್ಟು 1734 ಹುದ್ದೆಗಳ 37 ಪತ್ರಿಕೆಗಳಿಗೆ ಒಟ್ಟಾರೆ 11,40,292 ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಾವುದೇ ಲೋಪ ದೋಷಗಳಿಲ್ಲದೆ ಸುಲಲಿತವಾಗಿ ನಡೆಸಿರುತ್ತದೆ.<br><br>ಸದರಿ ಪರೀಕ್ಷೆಗಳ ಪೈಕಿ ದಿನಾಂಕ:27-08-2024ರಂದು ನಡೆದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆಯ ಕನ್ನಡ ಪ್ರಶ್ನಪತ್ರಿಕೆಯಲ್ಲಿ ಭಾಷಾಂತರ ಲೋಪದೋಷಗಳಿವೆಯೆಂದು ವ್ಯಾಪಕ ದೂರುಗಳು ಬಂದಿದ್ದ ಹಿನ್ನೆಲೆಯಲ್ಲಿ, ಸದರಿ ಪರೀಕ್ಷೆಯನ್ನು ಎರಡನೇ ಬಾರಿಗೆ ದಿನಾಂಕ: 29.12.2024 ರಂದು ನಡೆಸಲಾಗಿತ್ತು. ಎರಡನೇ ಬಾರಿ ನಡೆದ ಪರೀಕ್ಷೆಯಲ್ಲಿಯೂ ಸಹ ಕನ್ನಡ ಭಾಷಾಂತರ ಲೋಪ ದೋಷಗಳಿವೆಯೆಂದು ಕೆಲ ಪರೀಕ್ಷಾ ಆಕಾಂಕ್ಷಿಗಳು ದೂರು ನೀಡಿರುತ್ತಾರೆ.<br><br>ಈ ಸಂಬಂಧ, ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳ ಸಮಿತಿಗಳನ್ನು ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಭಾಷಾಂತರ ಮತ್ತು ತಾಂತ್ರಿಕ ದೋಷದಿಂದಾಗಿ ಕೆಲವು ಪ್ರಶ್ನೆಗಳಿಗೆ ಕೃಪಾಂಕ ಹಾಗೂ ಕೆಲವು |

| | | |
|---|---|---|
| | | ಪ್ರಶ್ನೆಗಳ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಳ್ಳಬಹುದೆಂದು ಹಾಗೂ ಇನ್ನುಳಿದ ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ. |
| ಆ | ಬಂದಿದ್ದಲ್ಲಿ, ಸದರಿ ಪರೀಕ್ಷೆಗಳಲ್ಲಿನ ಲೋಪದೋಷಗಳು ಮರುಕಳಿಸುತ್ತಿರಲು ಇರುವ ದೋಷಗಳಾದರು ಯಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು) | ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಆಂಗ್ಲ ಮತ್ತು ಕನ್ನಡ ಎರಡೂ ಭಾಷೆಗಳಲ್ಲಿ ಪ್ರಶ್ನೆಗಳನ್ನು ಸಿದ್ಧಪಡಿಸಿ ನೀಡಬೇಕೆಂದು ಸೂಚನೆ ನೀಡಿದ್ದಾಗ್ಯೂ ಕೆಲ ವಿಷಯ ತಜ್ಞರುಗಳು ಆಂಗ್ಲ ಭಾಷೆಯಲ್ಲಿ ಮಾತ್ರ ಪ್ರಶ್ನೆ ಪತ್ರಿಕೆ ತಯಾರಿಸಿ ನೀಡಿರುತ್ತಾರೆ. ಉಳಿದಂತೆ ಆಂಗ್ಲ ಭಾಷೆಯಲ್ಲಿರುವಂತಹ ಪ್ರಶ್ನೆಗಳನ್ನು ಕನ್ನಡಕ್ಕೆ ಭಾಷಾಂತರಿಸಲು ಭಾಷಾಂತರಕಾರರ ನೆರವನ್ನು ಪಡೆಯಲಾಗುತ್ತಿದ್ದು, ಪ್ರಶ್ನೆಗಳ ಗೋಪ್ಯತೆಯನ್ನು ಕಾಪಾಡುವ ದೃಷ್ಟಿಯಿಂದ ಆಯೋಗದಿಂದ ಪ್ರಶ್ನೆಗಳನ್ನು ಮತ್ತೊಮ್ಮೆ ಪರಿಶೀಲಿಸಲಾಗುವುದಿಲ್ಲ. |
| ಇ | ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯಲ್ಲೂ ಈ ರೀತಿಯ ಲೋಪದೋಷಗಳು ಕಂಡುಬರಲು ಕಾರಣಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು) | |
| ಈ | ಈ ರೀತಿಯ ಘಟನಾವಳಿಗಳನ್ನು ತಪ್ಪಿಸಿ, ವಿದ್ಯಾರ್ಥಿಗಳಿಗೆ ನೆರವಾಗಲು ಸರ್ಕಾರ ತೆಗೆದುಕೊಂಡ ಅಗತ್ಯ ಕ್ರಮಗಳಾವುವು; | ದಿನಾಂಕ:23-01-2025ರಂದು ಮುಖ್ಯ ಕಾರ್ಯದರ್ಶಿಯವರು ಸಭೆಯನ್ನು ನಡೆಸಿ, ದಿನಾಂಕ:29-12-2024ರಂದು ನಡೆಸಿದ ಗೆಜೆಟೆಡ್ ಪ್ರೊಬೆಷನರ್ ಪೂರ್ವಭಾವಿ ಮರುಪರೀಕ್ಷೆಯ ಪ್ರಶ್ನೆಪತ್ರಿಕೆಯಲ್ಲಿನ ಕನ್ನಡ ಭಾಷಾಂತರದಲ್ಲಿ ಉಂಟಾಗಿರುವ ಲೋಪದ ಕುರಿತು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗಗಳ ಸಹಯೋಗದೊಂದಿಗೆ ಒಂದು ಕನ್ನಡ ಭಾಷಾ ತಜ್ಞರ ತಂಡವನ್ನು ರಚಿಸಲು ಪರಿಶೀಲಿಸಲಾಗುತ್ತಿದೆ. |

ಸಂಖ್ಯೆ: ಸಿಆಸುಇ 28 ಎಸ್‌ಎಸ್‌ಸಿ 2025

(ಸಿದ್ಧರಾಮಯ್ಯ)

ಮುಖ್ಯಮಂತ್ರಿ